## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೆಳಗಾವಿ ನಗರದ ಮಹಾ ಯೋಜನೆ (ಪ-2) ಕ್ಕೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ:ನಅಇ:440:ಬೆಮಪ್ರಾ:2006, ದಿ:30-12-2006.
2) ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ಪತ್ರ ಸಂಖ್ಯೆ:ಬೆನಪ್ರಾ:ಯೋ:ಮ.ಯೋ (ಪ-2) :ಅಂ:ಅ:2013-14/2980, ದಿ:26-10-2011.
3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ:ನಗ್ರಾಯೋ:(7):ಉನಿ (ಮ.ಯೋ-2):ಬೆ.ಮ.ಯೋ:2013-14 ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ 21-11-2013.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಬೆಳಗಾವಿ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಬೆಳಗಾವಿ ಯೋಜನಾ ಪ್ರಾಧಿಕಾರವು, ಬೆಳಗಾವಿ ನಗರದ ಸ್ಥಳೀಯ ಯೊಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪ-2) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)(2) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿದೆ.

ಮೇಲೆ ಓದಲಾದ (3)ರಲ್ಲಿ, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಕಡತದಲ್ಲಿ, ಬೆಳಗಾವಿ ನಗರದ ಜನಸಂಖ್ಯೆಯು 2021 ರಲ್ಲಿ 800000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಬೆಳಗಾವಿ ನಗರದ ಸ್ಥಳೀಯ ಯೋಜನಾ ಪ್ರದೇ ನ (ಪ-2) ಒಟ್ಟು 8080.71 ಹೆಕ್ಟೇರ್ಸ್ ಪ್ರದೇಶವನ್ನು ನಗರದ ಅಭಿವೃದ್ಧಿಗಾಗಿ ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ್ಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ (12)ರಲ್ಲಿ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಯೋಜಿತ ಬೆಳವಣಿಗೆಗೆ

...2

ಪ್ರಸ್ತಾಪಿಸಿರುವ 8080.71ಹೆಕ್ಟೇರ್ಸ್ ಪ್ರದೇಶದಲ್ಲಿ ವಸತಿಗಾಗಿ 3795.85 ಹೆಕ್ಟೇರ್ (ಶೇ.46.97), ವಾಣಿಜ್ಯಕ್ಕಾಗಿ 241.39 ಹೆಕ್ಟೇರ್ (ಶೇ.3.00), ಕೈಗಾರಿಕೆಗಾಗಿ 839.75 ಹೆಕ್ಟೇರ್ (ಶೇ.10.39), ಸಾರ್ವಜನಿಕಃಅರೆ ಸಾರ್ವಜನಿಕ ಉಪಯೋಗಕ್ಕೆ 549.61 ಹೆಕ್ಟೇರ್(ಶೇ.6.80) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 800.19 ಹೆಕ್ಟೇರ್ (ಶೇ.9.90) ಹಾಗೂ ಸಾರಿಗೆ / ಸಂಪರ್ಕ ವಲಯಕ್ಕೆ 1696.88 ಹೆಕ್ಟೇರ್ (ಶೇಕಡ 21.00), ನಾಗರೀಕ ಸೌಲಭ್ಯಕ್ಕಾಗಿ 157.04 ಹೆಕ್ಟೇರ್ (ಶೇ.1.94) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ ಯೋಜನೆಯನ್ನು (ಪ-2) ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ. ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 83 ಬೆಮಪ್ರಾ 2013, ದಿನಾಂಕ:15.02.2014**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಳಗಾವಿ ನಗರದ ಮಹಾ ಯೋಜನೆ (ಪ-2) ನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾ ಯೋಜನೆಗೆ (ಪ-2) ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

<u>ಷರತ್ತುಗಳು:</u>

1) ಈ ಆದೇಶದ ದಿನಾಂಕದಿಂದ ಎರಡು ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.

2) ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಒಳಪಡುವ ಭೂ ಉಪಯೋಗ ಬದಲಾವಣೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಚನ್ಯಾಯಾಲಯವು ನೀಡಿರುವ ಆದೇಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

3) ಮಹಾಯೋಜನೆಯಲ್ಲಿ ಗುರುತಿಸಲಾಗಿರುವ ಸರ್ವೆ ನಂಬರುಗಳು, ನಾಲೆ/ ಅತಿಹೆಚ್ಚು ವಿದ್ಯುತ್ ವಾಹಕ ತಂತಿಗಳು / ಹಾಲಿ ರಸ್ತೆ / ಕೆರೆ, ಕೊಳಗಳಲ್ಲಿ ಯಾವುದಾದರು ತಪ್ಪಿದ್ದಲ್ಲಿ ಅಂತಹ ತಪ್ಪುಗಳನ್ನು ಸೂಕ್ತ ದಾಖಲೆಗಳೊಂದಿಗೆ ಸ್ಥಳ ಪರಿಶೀಲಿಸಿ, ದೃಢಪಡಿಸಿಕೊಂಡು ವಾಸ್ತವಾಂಶಗಳನ್ನು ಗಣನೆಗೆ ತೆಗೆದುಕೊಂಡು ಪ್ರಾಧಿಕಾರವು ಸರಿಪಡಿಸಿಕೊಳ್ಳತಕ್ಕದ್ದು.

...3

4) ಮಹಾಯೋಜನೆಯಲ್ಲಿ ಗುರುತಿಸಿರುವ ಅಧಿಕ ವಿದ್ಯುತ್ ವಾಹಕ ತಂತಿ, ರಸ್ತೆ, ನಾಲೆಯ ಪಂಕ್ತೀಕರಣದಲ್ಲಿ ಹಾಗೂ ಹಾಲಿ ಭೂಮಿಯ ಮೇಲೆ ಹಾಲಿ ಇರುವ ಪಂಕ್ತೀಕರಣದಲ್ಲಿ ವ್ಯತ್ಯಾಸವಿದ್ದಲ್ಲಿ, ಮಹಾಯೋಜನೆಯಲ್ಲಿ, ಹಾಲಿ ಇರುವ ಪಂಕ್ತೀಕರಣದನ್ವಯ ಗುರುತಿಸಿದ ನಂತರ ಉಳಿಯುವ ಜಾಗವನ್ನು ಜಮೀನಿಗೆ ಹೊಂದಿಕೊಂಡಿರುವ ಭೂ ಉಪಯೋಗವನ್ನು ನಿಗಧಿಪಡಿಸಬಹುದು.

5) ಹಾಲಿ ರಸ್ತೆಯ ಪಂಕ್ತೀಕರಣವನ್ನು ಮಹಾಯೋಜನೆಯಲ್ಲಿ ತಪ್ಪಾಗಿ ಗುರುತಿಸಿದಂತಹ ಪ್ರಕರಣಗಳಲ್ಲಿ, ಸೂಕ್ತ ದಾಖಲೆಗಳೊಂದಿಗೆ (Cadestial Map) ಹಾಲಿ ಭೂಮಿಯಲ್ಲಿರುವ ರಸ್ತೆ ಪಂಕ್ತೀಕರಣವನ್ನು ರಸ್ತೆ ಅಂಗೀಕರಣ ಮಾಡುವಾಗ ಪರಿಗಣನೆಗೆ ತೆಗೆದುಕೊಳ್ಳತಕ್ಕದ್ದು. ಹಾಗೂ ಮಹಾಯೋಜನೆಯಲ್ಲಿ ಹಾಲಿ ರಸ್ತೆಯನ್ವಯ ಪಂಕ್ತೀಕರಣ ಅಳವಡಿಸಿಕೊಂಡ ನಂತರ ಉಳಿಯುವ ಜಾಗವನ್ನು ಜಮೀನಿಗೆ ಹೊಂದಿಕೊಂಡಿರುವ ಭೂ ಉಪಯೋಗ (Higher land use) ನಿಗಧಿಪಡಿಸಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ಎಂ.ವಾಸುದೇವರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

15/2/14

ಇವರಿಗೆ:

1) ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಪ್ರಕಟಿತ 100 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಒದಗಿಸುವಂತೆ ಕೋರಲಾಗಿದೆ.
2) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು-01.
3) ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಬೆಳಗಾವಿ.
4) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಬೆಳಗಾವಿ.
5) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.